ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲ್ಪಟ್ಟಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಸವರಾಜ್ ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) : ಮಾನ್ಯ ಅಧ್ಯಕ್ಷರೆ, "2006ರ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2006ರ ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ(ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕಕ್ಕೆ ಒಪ್ಪಿಗೆ ನೀಡಲಾಯಿತು.

(ಅನುಬಂಧ–4)

(ಉ) ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ 2005 ಮಂಡನೆಗೆ ಅನುಮತಿ ಕೋರಿಕೆ.

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯ ಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, "2005ನೇ ಸಾಲಿನ ಕರ್ನಾಟಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2005ರ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕ ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಹೆಚ್. ಡಿ. ಕುಮಾರಸ್ವಾಮಿ (ಮುಖ್ಯ ಮಂತ್ರಿಗಳು): ಮಾನ್ಯ ಅಧ್ಯಕ್ಷರೆ, 2005ರ ಕರ್ನಾಟಕ ಅತ್ಯಾವಶ್ಯಕ ಸೇವೆಗಳ ನಿರ್ವಹಣಾ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.